ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :—

ಅ) 217

ಆ) ಪ್ರೌಢಶಾಲೆ - 01

ಪ್ರಾಥಮಿಕ ಶಾಲೆ - 10

ಇ) ಇಲ್ಲ. ಕೊರಟಗೆರೆ ಕ್ಷೇತ್ರಕ್ಕೆ 1998-99ನೇ ಸಾಲಿನಲ್ಲಿ ಒಂದು ಸರ್ಕಾರಿ ಪ್ರೌಢಶಾಲೆಯು ಮಂಜೂರಾಗಿದ್ದು ಪ್ರೌಢಶಾಲಾ ಕಟ್ಟಡದ ಕಾಮಗಾರಿಯು ಪ್ರಾರಂಭವಾಗಿರುವುದಿಲ್ಲ. ಹಂತಹಂತವಾಗಿ ಸರ್ಕಾರದಿಂದ ಆಯವ್ಯಯ ಒದಗಿಸಿಕೊಂಡು ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.

ಈ ಕ್ಷೇತ್ರಕ್ಕೆ 1998-99ನೇ ಸಾಲಿಗೆ ಮಂಜೂರಾಗಿರುವ 10 ಕಿರಿಯ ಪ್ರಾಥಮಿಕ ಶಾಲೆಗಳಿಗೆ ಕಟ್ಟಡ ನಿರ್ಮಾಣ ಮಾಡಲು ಕ್ರಿಯಾ ಯೋಜನೆ ಸಿದ್ಧವಾಗಿದ್ದು ಮುಂದಿನ ಸಾಲಿನಲ್ಲಿ ಹಂತಹಂತವಾಗಿಕಟ್ಟಡ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಕೊರಟಗೆರೆ ಕ್ಷೇತ್ರಕ್ಕೆ ಮಂಜೂರಾಗಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು.

781(935) ಶ್ರೀ ಚನ್ನಿಗಪ್ಪ ಸಿ. (ಕೊರಟಗೆರೆ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸದಾಗಿ ಮಂಜೂರಾದ ಪ್ರ.ಆ.ಕೇಂದ್ರಗಳ ಸಂಖ್ಯೆ ಎಷ್ಟು? ಆ ಪೈಕಿ ಕೊರಟಗೆರೆ ಕ್ಷೇತ್ರಕ್ಕೆ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು?

ಆ) ಅಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ನಿರ್ಮಾಣಕ್ಕೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ರಾಜ್ಯದಲ್ಲಿ ಹೋದ ವರ್ಷ 75 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಲಾಗಿದೆ. ಇವುಗಳಲ್ಲಿ ಕೊರಟಗೆರೆ ಕ್ಷೇತ್ರಕ್ಕೆ ಯಾವುದೇ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾಗಿಲ್ಲ.

ಆ) ಹೊಸದಾಗಿ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸರ್ಕಾರದ ಆದೇಶದಲ್ಲಿರುವಂತೆ ಕನಿಷ್ಠ 2 ಎಕರೆ ನಿವೇಶನ ಮತ್ತು 1 ಲಕ್ಷ ರೂ. ವಂತಿಗೆ ಒದಗಿಸಿದಂತಹ ಗ್ರಾಮಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡಗಳನ್ನು ನಿರ್ಮಾಣ ಮಾಡಲು ಜಿಲ್ಲಾ ಪಂಚಾಯತ್ ಆಯವ್ಯಯದಲ್ಲಿ ಅನುದಾನ ಒದಗಿಸಿಕೊಂಡು ಕ್ರಮ ಕೈಗೊಳ್ಳಲಾಗುವುದು.